ಶ್ರೀ ಇಕ್ಬಾಲ್ ಅನ್ಸಾರಿ (ಕಾರ್ಮಿಕ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು): ಅ) ಬಂದಿದೆ.

ಆ) ಡಾ: ಅಂಬೇಡ್ಕರ್ ಅಭಿವೃದ್ಧಿ ನಿಗಮದ ವತಿಯಿಂದ ಬಾಗೇಪಲ್ಲಿ ವಿಧಾನಸಭಾ ಕ್ಷೇತ್ರದಲ್ಲಿ 14 ಕೊಳವೆ ಬಾವಿಗಳಿಗೆ ಪಂಪುಸೆಟ್ಟು ಅಳವಡಿಸಬೇಕಾಗಿರುತ್ತದೆ.

2005–06ನೇ ಸಾಲಿನಲ್ಲಿ ನಿಗದಿಪಡಿಸಿದ ಗರಿಷ್ಟ ರೂ. 65,000/– ಸಹಾಯ ಧನದಲ್ಲಿ ಬಾವಿ ಕೊರೆದು ಪಂಪ್ ಅಳವಡಿಸಿ ವಿದ್ಯುದ್ದೀಕರಣಗೊಳಿಸಲು ಆಗಲಿಲ್ಲ. ಆದಕಾರಣ ರೂ. 65,000/– ಸಹಾಯ ಧನದೊಂದಿಗೆ ರೂ. 15,000/– ಅವಧಿ ಸಾಲವನ್ನು, ರಾಷ್ಟ್ರೀಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಹಣಕಾಸು ಅಭಿವೃದ್ಧಿ ನಿಗಮ, ಹೊಸದೆಹಲಿ ಇವರಿಂದ ಶೇ: 6ರ ಬಡ್ಡಿ ದರದಲ್ಲಿ ಸಾಲ ಪಡೆದು, ಒಟ್ಟು ರೂ. 80,000/–ಗಳ ಘಟಕ ವೆಚ್ಚದಲ್ಲಿ ಕೊಳವೆ ಬಾವಿ ಕೊರೆದು, ಪಂಪ್‌ಸೆಟ್ ಅಳವಡಿಸಿ, ವಿದ್ಯುದ್ದೀಕರಣಗೊಳಿಸಲು ನಿರ್ದೇಶನ ನೀಡಲಾಗಿದೆ.

ಅದರಂತೆ ಅವಧಿಸಾಲಕ್ಕೆ ಫಲಾನುಭವಿಗಳಿಂದ ಅಗತ್ಯ ದಾಖಲಾತಿಗಳನ್ನು ಪಡೆದು ಸಾಲ ಮಂಜುರು ಮಾಡಬೇಕಾಗಿದ್ದು, ಈ ಸಂಬಂಧ ಫಲಾನುಭವಿಗಳು ಅಗತ್ಯ ದಾಖಲಾತಿಗಳನ್ನು ಒದಗಿಸದೇ ಇರುವುದರಿಂದ ವಿಳಂಬವಾಗುತ್ತಿದೆ. ಬಾಕಿ ಇರುವ ಎಲ್ಲಾ ಕೊಳವೆ ಬಾವಿಗಳಿಗೆ ಫಲಾನುಭವಿಗಳಿಗೆ ಅಗತ್ಯ ದಾಖಲಾತಿಗಳನ್ನು ಪಡೆದು, ಶೀಘ್ರ ಸಾಲ ಮಂಜೂರು ಮಾಡಿಸಿ ಎಲ್ಲಾ ಕೊಳವೆ ಬಾವಿಗಳಿಗೆ ಪಂಪ್‌ಸೆಟ್‌ಗಳನ್ನು ಅಳವಡಿಸಲು ಸೂಕ್ತ ನಿರ್ದೇಶನ ನೀಡಲಾಗಿದೆ.

ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ವತಿಯಿಂದ 2005–06ನೇ ಸಾಲಿಗೆ ಗಂಗಾ ಕಲ್ಯಾಣ ವೈಯಕ್ತಿಕ ನೀರಾವರಿ ಯೋಜನೆಯಲ್ಲಿ ಬಾಗೇಪಲ್ಲಿ ಕ್ಷೇತ್ರದಲ್ಲಿ 5 ಕೊಳವೆ ಬಾವಿಗಳನ್ನು ಕೊರೆಯಿಸಲಾಗಿರುತ್ತದೆ. ಈ ಪೈಕಿ 4 ಕೊಳವೆ ಬಾವಿಗಳಿಗೆ ಪಂಪ್‌ಸೆಟ್ ಅಳವಡಿಸಲಾಗಿದ್ದು, ಉಳಿದ 1 ಕೊಳವೆ ಬಾವಿಗೆ ಇತ್ತೀಚೆಗೆ ಪಂಪ್‌ಸೆಟ್ ಸರಬರಾಜು ಮಾಡಲಾಗಿದೆ.

103 (177) ಶ್ರೀ ಜಿ.ವಿ. ಶ್ರೀರಾಮರೆಡ್ಡಿ (ಬಾಗೇಪಲ್ಲಿ): ಮಾನ್ಯ ಕಾರ್ಮಿಕ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬಾಗೇಪಲ್ಲಿಯಲ್ಲಿನ ಸರ್ಕಾರಿ ಐಟಿಐಗೆ ಸ್ವಂತ ಕಟ್ಟಡ ಇಲ್ಲದೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಆ) ಸದರಿ ಐಟಿಐಗೆ ಸ್ವಂತ ಕಟ್ಟಡ ನಿರ್ಮಿಸುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ ;

ಇ) ಹಾಗಿದ್ದಲ್ಲಿ ಸರ್ಕಾರ ಈ ಬಗ್ಗೆ ಕೈಗೊಳ್ಳುವ ಕ್ರಮವೇನು ?

ಶ್ರೀ ಇಕ್ಬಾಲ್ ಅನ್ಸಾರಿ (ಕಾರ್ಮಿಕ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು):

ಅ) ಹೌದು.

ಆ) ಹೌದು.

ಇ) ನಿವೇಶನದ ಸುತ್ತಲೂ ಆವರಣ ಗೋಡೆಯನ್ನು ನಿರ್ಮಾಣ ಮಾಡಲಾಗಿದೆ. ಕಟ್ಟಡ ನಿರ್ಮಾಣ ಪ್ರಸ್ತಾವನೆಯು ಪರಿಶೀಲನೆಯಲ್ಲಿದೆ.

94 (192) ಶ್ರೀ ಶಂಕರಲಿಂಗೇಗೌಡ (ಚಾಮರಾಜ): ಮಾನ್ಯ ಕಾರ್ಮಿಕ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಾದ್ಯಂತ ಎಲ್ಲೆಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಹಾಸ್ಟಲ್‌ಗಳಿವೆ ಸ್ವಂತ ಕಟ್ಟಡದಲ್ಲಿರುವ ಹಾಸ್ಟೆಲ್‌ಗಳು ಯಾವುವು ಹಾಗೂ ಬಾಡಿಗೆ ಕಟ್ಟಡದಲ್ಲಿರುವ ಹಾಸ್ಟೆಲ್‌ಗಳು ಯಾವುವು (ಮಹಿಳಾ ಹಾಗೂ ಪುರುಷರ ಬಾಲಕರ ಹಾಗೂ ಬಾಲಕಿಯರ ಹಾಸ್ಟಲ್‌ಗಳ ಸಂಖ್ಯೆ ಒದಗಿಸುವುದು) ;

ಆ) ಪ್ರತಿ ಹಾಸ್ಟಲ್‌ಗಳಲ್ಲಿರುವ ಕೊಠಡಿಗಳ ಸಂಖ್ಯೆ ಎಷ್ಟು ; ಹಾಗೂ ಯಾವ ತರಗತಿಯ ಎಷ್ಟೆಷ್ಟು ವಿದ್ಯಾರ್ಥಿಗಳಿದ್ದಾರೆ ;

ಇ) ಈ ಹಾಸ್ಟೆಲ್‌ಗಳಲ್ಲಿ ವಾಚನಾಲಯ ದಾಸ್ತಾನು ಕೊಠಡಿ, ಶೌಚಾಲಯ, ಸ್ನಾನದ ಕೊಠಡಿಗಳಿವೆಯೇ ; ವಿವರಗಳನ್ನು ಒದಗಿಸುವುದು ;

ಈ) ಈ ಹಾಸ್ಟೆಲ್‌ಗಳಲ್ಲಿನ ಆಹಾರ ಕ್ರಮವೇನು ;

ಉ) ಪೂರ್ಣ ಸಿಬ್ಬಂದಿಗಳ ವಿವರಗಳೇನು ;

ಊ) ಈ ಹಾಸ್ಟೆಲ್‌ಗಳಲ್ಲಿನ ಅವ್ಯವಸ್ಥೆ ಬಗ್ಗೆ ಸರ್ಕಾರಕ್ಕೆ ದೂರು ಬಂದಿದೆಯೇ ;

ಋ) ಬಂದಿದ್ದಲ್ಲಿ ಸದರಿ ಅವ್ಯವಸ್ಥೆ ದೂರುಗಳ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮವೇನು ?

ಶ್ರೀ ಇಕ್ಬಾಲ್ ಅನ್ಸಾರಿ (ಕಾರ್ಮಿಕ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು):

ಅ) 1. ರಾಜ್ಯದಲ್ಲಿ 07 ಮೆಟ್ರಿಕ್ ನಂತರದ ಹಾಗೂ 16 ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳು ಸೇರಿದಂತೆ 23 ಅಲ್ಪಸಂಖ್ಯಾತರ ವಿದ್ಯಾರ್ಥಿ ನಿಲಯಗಳಿವೆ. ಪಟ್ಟಿಯನ್ನು ಅನುಬಂಧದಲ್ಲಿ ಲಗತ್ತಿಸಿದೆ.

2. ಇವುಗಳಲ್ಲಿ ಧಾರವಾಡ, (ಮೆಟ್ರಿಕ್ ನಂತರದ ಬಾಲಕಿಯರು) ಬಿಜಾಪುರ (ಮೆಟ್ರಿಕ್ ಪೂರ್ವ ಬಾಲಕಿಯರು) ಹಾಗೂ ದಾವಣಗೆರೆ (ಮೆಟ್ರಿಕ್ ನಂತರದ ಬಾಲಕಿಯರ) ವಿದ್ಯಾರ್ಥಿ ನಿಲಯಗಳು ಮಾತ್ರ ಸ್ವಂತ ಕಟ್ಟಡದಲ್ಲಿವೆ. ಇತರ ವಿದ್ಯಾರ್ಥಿ ನಿಲಯಗಳು ಬಾಡಿಗೆ ಕಟ್ಟಡದಲ್ಲಿವೆ.

ಆ) ಕೋರಿರುವ ಮಾಹಿತಿಯನ್ನು ಅನುಬಂಧದಲ್ಲಿ ಲಗತ್ತಿಸಿದೆ.

ಇ) ಈ ಎಲ್ಲಾ ಸ್ವಂತ ಕಟ್ಟಡಗಳಲ್ಲಿ ದಾಸ್ತಾನು ಕೊಠಡಿ, ಶೌಚಾಲಯ, ಸ್ನಾನದ ಕೊಠಡಿಗಳು ಇರುತ್ತವೆ. ಆದರೆ ಬಾಡಿಗೆ ಕಟ್ಟಡದಲ್ಲಿನ ವಿದ್ಯಾರ್ಥಿ ನಿಲಯಗಳಲ್ಲಿ ಈ ಸೌಕರ್ಯಗಳು ಇದ್ದರೂ ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿರುವುದಿಲ್ಲ.